# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೦೪-೦೮-೨೦೨೩

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರು**

..................................................ಬೆಂಗಳೂರು ಪ್ರಕಟಣೆಯ ಕೃಪೆಗಾಗಿ

## ಕನ್ನಡ ಜನಪದರು ಲಾಭದ ಆಸೆಗೆ ಮಣಿಯದೆ ಕನ್ನಡವನ್ನು ಉಳಿಸಿಕೊಂಡು ಬಂದಿದ್ದಾರೆ- ನಾಡೋಜ ಡಾ. ಮಹೇಶ ಜೋಶಿ

ಬೆಂಗಳೂರು: ಕನ್ನಡದ ಜನಪದರು ಆರ್ಥಿಕವಾಗಿ ಬಡತನವನ್ನು ಕಂಡಿರಬಹುದು, ಆದರೆ ಅವರ ಕಲಾ ಸಿರಿವಂತಿಕೆಯ ಮುಂದೆ ಯಾವುದೇ ಐಶ್ವರ್ಯಗಳು ನಿಲ್ಲಲು ಸಾಧ್ಯವೇ ಇಲ್ಲ. ಕನ್ನಡ ನಾಡಿನಲ್ಲಿ ಕನ್ನಡವನ್ನು ಉಳಿಸಿ ಬೆಳೆಸುವಲ್ಲಿ ಜನಪದರ ಕೊಡುಗೆ ಅಪಾರವಾದದ್ದು. ಎಂತಹ ಕಷ್ಟ ಕಾಲ ಬಂದರೂ, ಲಾಭದ ಆಸೆಗೆ ಮಣಿಯದೇ ತಲೆ ತಲೆಮಾರುಗಳಿಂದ ಕನ್ನಡವನ್ನು ಉಳಸಿಕೊಂಡು ಬಂದವರು ನಮ್ಮ ಜನಪದರು. ಅಂಥವರನ್ನು ಗುರುತಿಸಿ ಗೌರವಿಸುವ ಭಾಗ್ಯ ನಮ್ಮವರಿಗೆ ದಕ್ಕಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಹೇಳಿದರು.

ಇಂದು **ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಹಮ್ಮಿಕೊಂಡ ಶ್ರೀಮತಿ ಲಕ್ಷ್ಮೀದೇವಿ ಮತ್ತು ಎಸ್. ರಾಮಚಂದ್ರ ಬಾಯರ್ ದತ್ತಿ, ಶ್ರೀಮತಿ ಕಂಡ್ಲೂರು ಗಿರಿಜಮ್ಮ ಮತ್ತು ನರಸಿಂಹ ಜೋಗಿ ದತ್ತಿ ಹಾಗೂ ಶ್ರೀಮತಿ ನಿಂಗಮ್ಮ ಹುಚ್ಚೇಗೌಡ ಕೋಡಿಹೊಸಹಳ್ಳಿ ದತ್ತಿ ಪ್ರಶಸ್ತಿಗಳ** ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕನ್ನಡ ಸಾಹಿತ್ಯ ಪರಿಷತ್ತು ಎಲೆಯ ಮರೆಯ ಪ್ರತಿಭೆಗಳನ್ನು ಗುರುತಿಸಿ, ಗೌರವಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತಲೇ ಬಂದಿದೆ, ಈ ಮೂಲಕ ಅನೇಕ ಸಾಧಕರನ್ನು ಪ್ರಮಾಣಿಕವಾಗಿ ಹುಡುಕಿ ಗುರುತಿಸಿ ಅವರ ಸಾಧನೆಗೆ ಬೆಳಕು ತೋರಿಸುವ ಕಾರ್ಯ ಮಾಡುತ್ತ ಬಂದಿದ್ದೇವೆ. ಅದಕ್ಕಾಗಿಯೇ ಸಮಸ್ತ ಕನ್ನಡಿಗರು ಕಳೆದ ೧೦೮ ವರ್ಷಗಳಿಂದ ಕನ್ನಡ ಸಾಹಿತ್ಯ ಪರಿಷತ್ತಿನ ವೇಳೆ ಅಪಾರವಾದ ಗೌರವ ಹಾಗೂ ವಿಶ್ವಾಸವನ್ನು ಇಟ್ಟುಕೊಂಡು ಬಂದಿದೆ. ಪರಿಣಾಮ ಪರಿಷತ್ತಿನಲ್ಲಿ ೨೦೦೦ಕ್ಕೂ ಹೆಚ್ಚು ದತ್ತಿ ಪ್ರಶಸ್ತಿಗಳನ್ನು ಕನ್ನಡಿಗರು ಅಭಿಮಾನದಿಂದ ಸ್ಥಾಪಿಸಿರುತ್ತಾರೆ. ಕನ್ನಡಿಗರ ವಿಶ್ವಾಸಕ್ಕೆ ಹಾಗೂ ಅಭಿಮಾನಕ್ಕೆ ಧಕ್ಕೆ ಬಾರದ ರೀತಿಯಲ್ಲಿ ನಮ್ಮ ಕರ್ತವ್ಯವನ್ನು ಮಾಡುತ್ತಿದ್ದೇವೆ, ದತ್ತಿ ಪ್ರಶಸ್ತಿಗಳು ಕೆಲವೇ ಕೆಲವು ಸಮುದಾಯಕ್ಕೆ ಸೀಮಿತವಾಗದೇ, ಸಮಾಜದ ಎಲ್ಲ ಕಲಾವಿದರನ್ನೂ ಹಾಗೂ ಭೌಗೋಲಿಕವಾಗಿ ಎಲ್ಲೆಡೆಯ ಸಾಧಕರನ್ನು ಗಮನಿಸಿ ಪ್ರಶಸ್ತಿ ನೀಡಲಾಗುತ್ತದೆ. ಜನಪದ ಕಲೆ, ಕಲಾವಿದರ ರಕ್ಷಣೆಯೂ ಪರಿಷತ್ತಿನ ಕರ್ತವ್ಯ ಎನ್ನುವದನ್ನು ಪರಿಷತ್ತು ಎಂದೂ ಮರೆಯುವುದಿಲ್ಲ. ಪ್ರಶಸ್ತಿ ನೀಡಲು ಯಾವುದೇ ಲಾಬಿ ಅಥವಾ ಪ್ರಭಾವ ನಡೆಯದು ಎಂಬುದನ್ನು ನಾನು ಹೆಮ್ಮೆಯಿಂದ ಹೇಳಬಯಸುತ್ತೇನೆ ಎಂದು **ನಾಡೋಜ ಡಾ. ಮಹೇಶ ಜೋಶಿ** ಅವರು ವಿಶ್ವಾಸ ವ್ಯಕ್ತ ಪಡಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಹಂಪಿ ವಿಶ್ವವಿದ್ಯಾಲಯದ **ವಿಶ್ರಾಂತ ಕುಲಪತಿಗಳಾದ ಡಾ. ಹಿ.ಚಿ. ಬೋರಲಿಂಗಯ್ಯ** ನವರು ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತಿನ ದತ್ತಿ ಪ್ರಶಸ್ತಿ ತನ್ನದೇ ಆದ ಮಹತ್ವವನ್ನು ಹೊಂದಿದೆ. ಸರಕಾರಿ ಪ್ರಶಸ್ತಿಗಳಂತೆ ಗೊಂದಲ ಗೂಡು, ಗೌಜು ಗಲಾಟೆಗಳು, ಆಯ್ಕೆಯಲ್ಲಿ ಯಾವುದೇ ರಾಜಕೀಯ ಇಲ್ಲಿ ಇರುವುದಿಲ್ಲ. ಹಾಗಾಗಿ ನಿಜವಾದ ಸಾಧಕರಿಗೆ ಯೋಗ್ಯ ಪ್ರಶಸ್ತಿಗಳು ಲಭ್ಯವಾಗತ್ತವೆ. ನಮ್ಮ ದೇಶದಲ್ಲಿ ಅತಿಹೆಚ್ಚು ಜನಪದ ಕಲಾ ಪ್ರಾಕಾರಗಳು ಇರುವುದು ನಮ್ಮ ನಾಡಿನಲ್ಲಿ ಬರೋಬರಿ ೧೮೪ ಅಧಿಕೃತ ಕಲಾ ಪ್ರಾಕಾರಗಳನ್ನು ದಾಖಲಿಸಲಾಗಿದೆ. ೨೧ ಜನಪದ ಮಹಾಕಾವ್ಯಗಳನ್ನು ಪ್ರಕಟಗೊಂಡಿವೆ. ಆದರೂ ಕನ್ನಡ ನಾಡಿನಲ್ಲಿ ಬಹುತೇಕ ಜನಪದ ಕಲೆಗಳು ನಾಪತ್ತೆಯಾಗುವ ಹಂತಕ್ಕೆ ಬಂದಿದೆ, ಮೂಡಪಾಯ ಶೇ.೯೯ ರಷ್ಟು ನಾಪತ್ತೆಯಾಗಿದೆ ಎಂದು ಕಳವಳ ವ್ಯಕ್ತ ಪಡಿಸಿದರು.

ಪ್ರಶಸ್ತಿ ಪ್ರದಾನ ಮಾಡಲು ಆಗಮಿಸಿದ ಚಲನಚಿತ್ರ ನಿರ್ಮಾಪಕಿ **ಶ್ರೀಮತಿ ಲಕ್ಷ್ಮೀ ವಜ್ರಮುನಿ** ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಕನ್ನಡ ಉಳಿಸಿ ಬೆಳೆಸು ಕೆಲಸವನ್ನು ಕಟ್ಟುನಿಟ್ಟಾಗಿ ಮಾಡಲಾಗುತ್ತಿದೆ. ಆದರೆ ನಮ್ಮ ಜನರು ಕನ್ನಡದ ಮೇಲಿನ ಅಭಿಮಾನವನ್ನು ಕಡಿಮೆ ಮಾಡಿಕೊಳ್ಳದೆ ಕನ್ನಡದ ಕಾರ್ಯಕ್ರಮಗಳಿಗೆ, ನಾಟಕ, ಯಕ್ಷಗಾನ, ಚಲನಚಿತ್ರಗಳನ್ನು ಹೆಚ್ಚು ಆಸಕ್ತಿಯಿಂದ ನೋಡುವ ಕಾರ್ಯಗಳು ನಡೆಯಬೇಕಿದೆ. ನಮ್ಮ ಸಂಸ್ಕೃತಿ ಉಳಿದಾಗ ನಮ್ಮ ಕನ್ನಡ ನವಿರಾಗಿ ನಳನಳಿಸುವುದು ಎಂದು ಹೇಳಿದರು.

**ತುಮಕೂರಿನ ಶ್ರೀ ಸಿ.ವಿ.ಮಹಾದೇವಯ್ಯ ಹಾಗೂ ಉಡುಪಿಯ ಶೀ ಟಿ.ಎನ್. ರಾಘವೇಂದ್ರ ರಾವ್** ಅವರಿಗೆ ಕ್ರಮವಾಗಿ ೨೦೨೧ ಹಾಗೂ ೨೦೨೨ ನೆಯ ಸಾಲಿನ ಶ್ರೀಮತಿ ಲಕ್ಷ್ಮೀದೇವಿ ಮತ್ತು ಎಸ್. ರಾಮಚಂದ್ರ ಬಾಯರ್ ದತ್ತಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. **ಕಾಸರಗೋಡಿನ ಶ್ರೀ ಕಾಸರಗೋಡು ಚಿನ್ನ, ವಿಜಯಪುರದ ಶ್ರೀಮತಿ ಭಾರತಿ ಬಿಜಾಪುರ, ಬೆಂಗಳೂರಿನ ಶ್ರೀ ರಂಗಶ್ರೀ ರಂಗಸ್ವಾಮಿ** ಅವರಿಗೆ ಕ್ರಮವಾಗಿ ೨೦೨೧, ೨೦೨೨ ಹಾಗೂ ೨೦೨೩ನೆಯ ಸಾಲಿನ **ಶ್ರೀಮತಿ ಕಂಡ್ಲೂರು ಗಿರಿಜಮ್ಮ ಮತ್ತು ನರಸಿಂಹ ಜೋಗಿ ದತ್ತಿ** ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

**ಬಾಗಲಕೋಟೆ ಜಿಲ್ಲೆಯ ಶ್ರೀಮತಿ ದೊಡ್ಡನಾಗಮ್ಮ , ಚಾಮರಾಜನಗರ ಜಿಲ್ಲೆಯ ಶ್ರೀಮತಿ ಚಿನ್ನಮ್ಮ, ಹಾವೇರಿ ಜಿಲ್ಲೆಯ ಶ್ರೀಮತಿ ಸಾವಕ್ಕ ಯಲ್ಲಪ್ಪ ಓಲೆಕಾರ ಹಾಗೂ ಬಾಗಲಕೋಟೆ ಜಿಲ್ಲೆಯ ಶ್ರೀಮತಿ ಬೋರವ್ವ ಬಾಗನ್ನವರ** ಇವರುಗಳಿಗೆ ಕ್ರಮವಾಗಿ ೨೦೦೯, ೨೦೧೦, ೨೦೧೧ ಮತ್ತು ೨೦೧೨ ನೆಯ ಸಾಲಿನ **ಶ್ರೀಮತಿ ನಿಂಗಮ್ಮ ಹುಚ್ಚೇಗೌಡ ಕೋಡಿಹೊಸಹಳ್ಳಿ ದತ್ತಿ ಪ್ರಶಸ್ತಿ ಪ್ರಧಾನ ಮಾಡಲಾಯಿತು**

ಪ್ರಶಸ್ತಿ ಪುರಸ್ಕೃತರ ಪರವಾಗಿ ಮಾತನಾಡಿದ **ಕಾಸರಗೋಡು ಚಿನ್ನ** ಕಾಸರಗೋಡು ಕರ್ನಾಟಕದ ಅವಿಭಾಜ್ಯ ಅಂಗ. ಇತ್ತೀಚೆಗೆ ಕಾಸರಗೋಡಿನಲ್ಲಿ ಕನ್ನಡ ಶಾಲೆಗಳು ಕಮ್ಮಿಯಾಗುತ್ತಿವೆ. ಕನ್ನಡಿಗರು ಕಾಣೆಯಾಗುತ್ತಿದ್ದಾರೆ. ಅಲ್ಲಿರುವ ಕನ್ನಡಿಗರಿಗೆ ಭಾಷಾ ಅಭದ್ರತೆ ಕಾಡುತ್ತಿದೆ. ಇಂತಹ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಗಡಿನಾಡು ಕಾಸರಗೋಡಿನ ವ್ಯಕ್ತಿಯನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಿದ್ದು ಅಲ್ಲಿಯ ಜನರಿಗೆ ಪರಿಷತ್ತು ನಮ್ಮ ಜೊತೆ ಇದೆ ಎನ್ನುವ ವಿಶ್ವಾಸ ಮೂಡಿಸಲಿದೆ. ಅದಕ್ಕಾಗಿ ಕನ್ನಡ ಸಾಹಿತ್ಯ ಪರಿಷತ್ತು ಕಾಸರಗೋಡಿನ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಕನ್ನಡ ಕಟ್ಟುವ ಕೆಲಸಕ್ಕೆ ನಮ್ಮ ಜನರಿಗೆ ಪ್ರೋತ್ಸಾಹ ನೀಡಬೇಕು ಎಂದು ಕೇಳಿಕೊಂಡರು

ದತ್ತಿ ದಾನಿಗಾದ ಗಣೇಶ್ ಫುಡ್ ಪ್ರಾಡಕ್ಟ್ಸ್ ಪ್ರೈ.ಲಿ ನ **ಶ್ರೀ ನಾಗರಾಜ ರಾವ್, ಶ್ರೀ ಶ್ರೀನಿವಾಸ ಜೋಗಿ ಬೆಂಗಳೂರು, ಶ್ರೀ ರಾಮಣ್ಣ ಎಚ್. ಕೋಡಿಹೊಸಹಳ್ಳಿ ಬೆಂಗಳೂರು** ಇವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಡಾ. ಪದ್ಮಿನಿ ನಾಗರಾಜು ಅವರು ಸ್ವಾಗತಿಸಿದರು. ಶ್ರೀ ನೇ.ಭ.ರಾಮಲಿಂಗ ಶೆಟ್ಟಿ ಅವರು ವಂದಿಸಿದರು. ಗೌರವ ಕೋಶಾಧ್ಯಕ್ಷರಾದ ಡಾ. ಬಿ.ಎಮ್. ಪಟೇಲ್ ಪಾಂಡು ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

__________________________ಬಾಕ್ಸ್____________________

## ಕಾಸರಗೋಡಿನ ಕನ್ನಡಿಗರೊಂದಿಗೆ ಪರಿಷತ್ತು.. ನಾಡೋಜ ಡಾ. ಮಹೇಶ ಜೋಶಿ

ಕಾಸರಗೋಡಿನಲ್ಲಿ ಕನ್ನಡ ಶಾಲೆಗಳು ಕಾಣೆಯಾಗುತ್ತಿದೆ, ಕನ್ನಡಿಗರು ಅನಾಥ ಭಾವನೆಯನ್ನು ಅನುಭವಿಸುತ್ತಿದ್ದಾರೆ ಎನ್ನುವ ಕಳವಳಕ್ಕೆ ಧೈರ್ಯತುಂಬುವ ಕೆಲಸವನ್ನು ಕನ್ನಡ ಸಾಹಿತ್ಯ ಪರಿಷತ್ತು ಮಾಡಲಿದೆ. ಗಡಿನಾಡಿನ ಕಾಸರಗೋಡಿನ ಜನ ಎಲ್ಲಾ ಕನ್ನಡದ ಚಟುವಟಿಕೆಗಳನ್ನು ಮಾಡಿಕೊಂಡು ಬರುತ್ತಿದ್ದಾರೆ. ಪರಿಷತ್ತು ಅಲ್ಲಿನ ಜನರೊಟ್ಟಿಗೆ ಸದಾ ಇದ್ದು ಸ್ವ ಇಚ್ಛೆಯಿಂದ ಕನ್ನಡದ ಕೆಲಸಗಳನ್ನು ಮಾಡಲಿದೆ. ಕಾಸರಗೋಡಿನ ಜನರ ಬೆನ್ನುಲುಲಾಗಿ ಕನ್ನಡ ಸಾಹಿತ್ಯ ಪರಿಷತ್ತು ನಿಂತುಕೊಳ್ಳಲಿದೆ. ಯಾವುದೇ ಕಾರಣಕ್ಕೂ ಗಡಿನಾಡ ಕನ್ನಡಿಗರು ಅನಾಥಭಾವನೆಯನ್ನು ಅನುಭವಿಸಬಾರದು. ಅದಲಕ್ಕಾಗಿಯೇ ಕನ್ನಡ ಸಾಹಿತ್ಯ ಪರಿಷತ್ತು ಕಾಸರಗೋಡಿನಲ್ಲಿ ಒಂದು ಗಡಿನಾಡ ಕನ್ನಡ ಸಮ್ಮೇಳನವನ್ನು ಕಾಸರಗೋಡಿನಲ್ಲಿ ನಡೆಸುವ ಭರವಸೆಯನ್ನು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ನೀಡಿದ್ದಾರೆ.

---

**ಛಾಯಾಚಿತ್ರ- ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಹಮ್ಮಿಕೊಂಡ ಶ್ರೀಮತಿ ಲಕ್ಷ್ಮೀದೇವಿ ಮತ್ತು ಎಸ್. ರಾಮಚಂದ್ರ ಬಾಯರ್ ದತ್ತಿ, ಶ್ರೀಮತಿ ಕಂಡ್ಲೂರು ಗಿರಿಜಮ್ಮ ಮತ್ತು ನರಸಿಂಹ ಜೋಗಿ ದತ್ತಿ ಹಾಗೂ ಶ್ರೀಮತಿ ನಿಂಗಮ್ಮ ಹುಚ್ಚೇಗೌಡ ಕೋಡಿಹೊಸಹಳ್ಳಿ ದತ್ತಿ ಪ್ರಶಸ್ತಿಗಳ ಪ್ರದಾನ ಮಾಡಲಾಯಿತು**

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು